# ಬ್ರಹ್ಮಸತ್ಯಂ ಜಗನ್ಮಿಥ್ಯಾ



❁ ಭಕ್ತ : ''ಮಹಾಶಯರೆ, ಈ ಸಂಸಾರ ಮಿಥ್ಯೆಯಾದುದೇನು?''

ಶ್ರೀರಾಮಕೃಷ್ಣರು: ''ಹೌದು, ಭಗವಂತನ ಸಾಕ್ಷಾತ್ಕಾರವನ್ನು ಪಡೆಯದವರೆಗೆ ಈ ಜಗತ್ತು ಮಿಥ್ಯೆಯಾದುದೆ. ಅಜ್ಞಾನವಶದಿಂದ ಮನುಷ್ಯ ಭಗವಂತನನ್ನು ಮರೆತು 'ನನ್ನದು, ನನ್ನದು' ಅನ್ನುತ್ತಲೇ ಇರುತ್ತಾನೆ. ಮಾಯೆಯಿಂದ ಬದ್ಧನಾಗಿ, ಕಾಮಕಾಂಚನದಿಂದ ಮುಗ್ಧನಾಗಿ ಅಧೋಗತಿಗೆ ಇಳಿಯುತ್ತಲೇ ಇರುತ್ತಾನೆ. ಮಾಯೆಯ ದೆಸೆಯಿಂದ ಮನುಷ್ಯ ಅಂಥ ಅಜ್ಞಾನಿಯಾಗುತ್ತಾನೆ. ಈ ಸಂಸಾರದಿಂದ ಮುಕ್ತನಾಗಲು ದಾರಿಯಿದ್ದರೂ ಕೂಡ ಅದನ್ನು ಪತ್ತೆ ಮಾಡಲಾರದವನಾಗಿ ಬಿಡುತ್ತಾನೆ!

❁ ಈ ಜಗತ್ತು ಎಷ್ಟು ಅನಿತ್ಯವಾದ್ದು ಎಂಬುದನ್ನು ನೀವು ನಿಮ್ಮ ಸ್ವಂತ ಅನುಭವದಿಂದಲೇ ಅರಿತುಕೊಂಡಿದ್ದೀರಿ. ಈ ದೃಷ್ಟಿಯಿಂದ ಅದನ್ನು ನೋಡಿ. ಎಷ್ಟೊಂದು ಜನ ಈ ಜಗತ್ತಿನಲ್ಲಿ ಹುಟ್ಟಿ ಸತ್ತಿದ್ದಾರೆ! ಜನ ಹುಟ್ಟುತ್ತಾರೆ ಮತ್ತು ಸಾಯುತ್ತಾರೆ. ಈ ಜಗತ್ತು ಈಗಿದೆ, ಈಗಿಲ್ಲ. ಅನಿತ್ಯವಾದ್ದು. ಯಾರನ್ನು 'ನನ್ನವರು, ನನ್ನವರು' ಅನ್ನುತ್ತಿದ್ದೀರೊ, ನೀವು ಸಾಯುವಾಗ ಕಣ್ಣು ಮುಚ್ಚಿದೊಡನೆಯೆ ಯಾರೂ ಜೊತೆಯಲ್ಲಿ ಬರುವುದಿಲ್ಲ. ಕೆಲಕೆಲವರಿಗೆ ಹತ್ತಿರದ ಸಂಬಂಧಿಗಳು ಯಾರೂ ಇಲ್ಲದಿದ್ದರೂ, ಅವರು ತಮ್ಮ ಮೊಮ್ಮಕ್ಕಳ ಸಲುವಾಗಿ ಕಾಶಿಗೆ ಹೋಗಲಾಗುವುದಿಲ್ಲ. 'ನಮ್ಮ 'ಹಾರು'ವಿನ ಗತಿ ಏನಾಗಿಬಿಡುತ್ತದೊ ಬಳಿಕ?' ಅಂತ ವಾದಿಸುತ್ತಾರೆ. 'ಬಂದು ಹೋಗಲು ಮಾರ್ಗವಿದೆ. ಆದರೂ ಮೀನು ಬೋನಿನಿಂದ ತಪ್ಪಿಸಿಕೊಂಡು ಹೋಗದು.' ರೇಷ್ಮೆಹುಳು ತನ್ನನ್ನು ತಾನೇ ಬಂಧಿಸಿಕೊಂಡು, ತಾನಾಗಿಯೇ ಸಾಯುತ್ತದೆ. ಈ ರೀತಿಯ ಈ ಜಗತ್ತು ಮಿಥ್ಯೆಯಾದ್ದು, ಅನಿತ್ಯವಾದ್ದು.

❁ 'ನೀನು ನಿನ್ನದು' ಎಂಬ ಭಾವನೆಯೇ ಜ್ಞಾನ; 'ನಾನು, ನನ್ನದು' ಎಂಬುದೇ ಅಜ್ಞಾನ. ಜ್ಞಾನ ಈ ಭಾವನೆಯನ್ನು ತರುತ್ತದೆ: 'ಹೇ ಭಗವಂತ, ನೀನೇ ಕರ್ತೃ, ನಾನು ಅಕರ್ತೃ. ಹೇ ಭಗವಂತ, ಎಲ್ಲವೂ ನಿನಗೆ ಸೇರಿದವೆ. ದೇಹ, ಮನಸ್ಸು, ಗೃಹ, ಪರಿವಾರ, ಜೀವ, ಜಗತ್ತು ಎಲ್ಲವೂ ನಿನಗೆ ಸೇರಿದವೆ. ಯಾವುದೂ ನನಗೆ ಸೇರಿದುದಲ್ಲ.'

❁ ಎರಡು ದೃಷ್ಟಿಗಳಿವೆ–ಒಂದು ವೇದಾಂತದ್ದು, ಇನ್ನೊಂದು ಪುರಾಣದ್ದು. ವೇದಾಂತ ದೃಷ್ಟಿಯಿಂದ 'ಈ ಜಗತ್ತು ಮಾಯೆಯ ಚೌಕಟ್ಟಿನ ಮನೆ!' ಅಂದರೆ ಸ್ವಪ್ನದೋಪಾದಿಯಲ್ಲಿ ಮಿಥ್ಯೆಯಾದದ್ದು. ಆದರೆ ಪುರಾಣದೃಷ್ಟಿಯಿಂದ, ಭಕ್ತಿಶಾಸ್ತ್ರದ ದೃಷ್ಟಿಯಿಂದ, ಭಗವಂತನೇ ಚತುರ್ವಿಂಶತಿ ತತ್ತ್ವಗಳಾಗಿದ್ದಾನೆ. ಆತನನ್ನು ಒಳಗೂ ಹೊರಗೂ ಪೂಜೆಮಾಡಿ.

❁ ಭಗವಂತನ ಮಾಯೆಯಿಂದಲೇ ಈ ಜಗತ್ತು, ಈ ಸಂಸಾರ ಉದ್ಭವಿಸಿದೆ. ಮಹಾಮಾಯೆಯಲ್ಲಿ ವಿದ್ಯಾಮಾಯೆ, ಅವಿದ್ಯಾಮಾಯೆ ಎರಡೂ ಇವೆ. ವಿದ್ಯಾಮಾಯೆಯನ್ನು ಅವಲಂಬಿಸಿದರೆ, ಸಾಧುಸಂಗ, ಜ್ಞಾನ, ಭಕ್ತಿ, ಪ್ರೇಮ, ವೈರಾಗ್ಯ ಇವೆಲ್ಲಾ ಉಂಟಾಗುತ್ತದೆ. ಅವಿದ್ಯಾಮಾಯೆ ಎಂದರೆ ಪಂಚಭೂತಗಳು ಮತ್ತು ಪಂಚೇಂದ್ರಿಯಗಳ ವಸ್ತುಗಳು–ರೂಪ, ರಸ, ಗಂಧ, ಸ್ಪರ್ಶ, ಶಬ್ದ, ಇವು ಭಗವಂತನನ್ನು ಮರೆಸಿಬಿಡುತ್ತವೆ.

❁ ಭಕ್ತ: ''ಅವಿದ್ಯೆಯಿಂದ ಅಜ್ಞಾನವುಂಟಾಗುವುದಾದರೆ, ಯಾಕೆ ಭಗವಂತ ಅದನ್ನು ಸೃಷ್ಟಿಸಿದ?''

ಶ್ರೀರಾಮಕೃಷ್ಣರು: ''ಆತನ ಲೀಲೆ. ಕತ್ತಲೆ ಇಲ್ಲದೆ ಇತ್ತು ಎಂದರೆ ಬೆಳಕಿನ ಮಹಿಮೆಯನ್ನು ಅರಿಯಲಾಗುವುದಿಲ್ಲ. ದುಃಖ ಇಲ್ಲದೆ ಇತ್ತು ಎಂದರೆ ಸುಖ ಏನು ಎಂಬುದನ್ನು ಅರಿಯಲಾಗುವುದಿಲ್ಲ. ಕೆಟ್ಟದ್ದು ಏನು ಎಂಬುದರ ಅರಿವು ಇದ್ದರೆ ತಾನೆ ಒಳ್ಳೆಯದು ಏನು ಎಂಬುದರ ಅರಿವು ಆಗಬೇಕಾದರೆ.

''ಸಿಪ್ಪೆ ಇರುವುದರಿಂದ ತಾನೆ ಮಾವಿನಕಾಯಿ ಬೆಳೆಯುತ್ತದೆ, ಹಣ್ಣಾಗುತ್ತದೆ. ಮಾವಿನ ಕಾಯಿ ಪೂರ್ತಿ ಹಣ್ಣಾಗಿ ತಿನ್ನಲು ಸಿದ್ಧವಾಯಿತು ಎಂದರೆ ಆಗ ಸಿಪ್ಪೆಯನ್ನು ಬಿಸಾಡಿಬಿಡಬೇಕಾಗುತ್ತದೆ. ಮಾಯಾರೂಪದ ಸಿಪ್ಪೆ ಇರುವುದರಿಂದ ಕ್ರಮೇಣ ಬ್ರಹ್ಮಜ್ಞಾನ ಸಾಧ್ಯ. ಮಾವಿನಕಾಯಿ ಸಿಪ್ಪೆಯ ಹಾಗೆ. ವಿದ್ಯಾಮಾಯೆ, ಅವಿದ್ಯಾಮಾಯೆ ಎರಡೂ ಆವಶ್ಯಕ.''

❁ ವೇದಾಂತವಾದಿಗಳು ಹೇಳುತ್ತಾರೆ, 'ಸೋऽಹಮ್', ಎಂದರೆ 'ನಾನೇ ಭಗವಂತ.' ಬ್ರಹ್ಮ ಸತ್ಯಂ, ಜಗನ್ಮಿಥ್ಯಾ. 'ನಾನು' ಎಂಬುದೂ ಮಿಥ್ಯಾ. ಕೇವಲ ಆ ಪರಬ್ರಹ್ಮ ಮಾತ್ರ ಸತ್ಯ.

ಆದರೆ 'ಅಹಂ' ಎಂಬುದು ಹೋಗುವುದಿಲ್ಲವಾದ್ದರಿಂದ, 'ನಾನು ಭಗವಂತನ ದಾಸ, ಭಗವಂತನ ಪುತ್ರ, ಭಗವಂತನ ಭಕ್ತ' ಎಂಬ ಭಾವ ಬಹಳ ಒಳ್ಳೆಯದು.

❁ ಜ್ಞಾನಯೋಗಿ ಜ್ಞಾನಮಾರ್ಗನಿಷ್ಠನಾಗಿ ಸರ್ವದಾ 'ನೇತಿ, ನೇತಿ' ಎಂಬ ವಿಚಾರದಲ್ಲಿ, ಅಂದರೆ 'ಬ್ರಹ್ಮ ಇದಲ್ಲ, ಅದಲ್ಲ, ಜೀವವಲ್ಲ, ಜಗತ್ತಲ್ಲ' ಎಂಬ ವಿಚಾರದಲ್ಲಿ ತೊಡಗಿರುತ್ತಾನೆ. ಈ ರೀತಿಯಾಗಿ ವಿಚಾರ ಮಾಡುತ್ತ ಮಾಡುತ್ತ ಮುಂದುವರಿದರೆ ಮನಸ್ಸು ಸ್ಥಿರವಾಗುತ್ತದೆ. ಬಳಿಕ ಮನಸ್ಸು ಲಯ ಹೊಂದುತ್ತದೆ, ಸಮಾಧಿಯುಂಟಾಗುತ್ತದೆ; ಆಗ ಬ್ರಹ್ಮಜ್ಞಾನ ದೊರೆಯುತ್ತದೆ.

ಶ್ರೀರಾಮಕೃಷ್ಣ ವಚನವೇದದಿಂದ